**<u>ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ ನ್ಯಾಯಾಲಯ, ಟಿ.ನರಸೀಪುರ</u>**

<u>ದಿನಾಂಕ 29 ನೇ ಡಿಸೆಂಬರ್ 2025</u>

**<u>ಸಿ.ಸಿ. 2824/2025</u>**

ಪಿರ್ಯಾದುದಾರರುಃ ರಾಜ್ಯದ ಪರ ಬನ್ನೂರು ಪೊಲೀಸರು

ವಿರುದ್ಧ

ಆರೋಪಿಃ ರಾಮೇಗೌಡ ಬಿನ್ ಕಾಳೇಗೌಡ, 45 ವರ್ಷ,
ವಾಸಃ ಕೇತುಪುರ ಗ್ರಾಮ, ಸೋಸಲೆ ಹೋಬಳಿ,
ಟಿ.ನರಸೀಪುರ ತಾಲ್ಲೂಕು, ಮೈಸೂರು ಜಿಲ್ಲೆ.

**<u>ಆರೋಪಣೆ</u>**

**ಶ್ರೀ ಸಚಿನ್ ಹೆಚ್.ಆರ್, ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ, ಟಿ.ನರಸೀಪುರ, ಆದ ನಾನು ಮೇಲ್ಕಂಡ ಆರೋಪಿಯಾದ ನಿಮ್ಮ ಮೇಲೆ ಕೆಳಕಂಡಂತೆ ಆರೋಪಣೆಯನ್ನು ಮಾಡುತ್ತೇನೆ.**

ದಿನಾಂಕ 05/11/2025 ರಂದು ಮಧ್ಯಾಹ್ನ 12.00 ಗಂಟೆ ಸಮಯದಲ್ಲಿ ಬನ್ನೂರು ಠಾಣಾ ವ್ಯಾಪ್ತಿಯ, ಬೇವಿನಹಳ್ಳಿ ಗ್ರಾಮದ ಬೊಮ್ಮಯ್ಯ ರವರ ಮನೆಯ ನೇರ ರಾಜ್ಯ ಹೆದ್ದಾರಿ 79 ರ ಬನ್ನೂರು–ಟಿ.ನರಸೀಪುರ ರಸ್ತೆಯಲ್ಲಿ, ಚಾಸಾ.2 ರವರು ತಮ್ಮ ಬಾಬ್ತು ಕೆಎ–09–ಹೆಚ್ ವೈ–0476 ರ ಮೋಟಾರ್ ಸೈಕಲ್ ಅನ್ನು ಟಿ.ನರಸೀಪುರದ ಕಡೆಯಿಂದ ಕುಂತನಹಳ್ಳಿ ಕಡೆಗೆ ಚಾಲನೆ ಮಾಡಿಕೊಂಡು ಹೋಗುವಾಗ, ಆರೋಪಿಯಾದ ನೀವು ಮೋಟಾರ್ ಸೈಕಲ್ ಸಂಖ್ಯೆ ಕೆಎ–55–ವೈ–4849 ನ್ನು ಚಾಸಾ.2 ರವರ ಮೋಟಾರ್ ಸೈಕಲ್ ಹಿಂದಿನಿಂದ ಸಾರ್ವಜನಿಕ ರಸ್ತೆಯಲ್ಲಿ ಅತಿ ವೇಗ ಮತ್ತು ಅಜಾಗರೂಕತೆಯಿಂದ ಚಾಲನೆ ಮಾಡಿರುತ್ತೀರಿ, ಆ ಮೂಲಕ ಆರೋಪಿಯಾದ ನೀವು ಭಾರತೀಯ ನ್ಯಾಯ ಸಂಹಿತೆ ಕಲಂ **281** ರ ಅಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞತೆಯಲ್ಲಿ ಎಸಗಿರುತ್ತೀರಿ ಎಂದು ಅಪಾದಿಸಲಾಗಿದೆ.

ಎರಡನೆಯದಾಗಿ ಮೇಲೆ ಹೇಳಿರುವ ದಿನಾಂಕ, ಸಮಯ ಮತ್ತು ಸ್ಥಳದಂದು ಆರೋಪಿಯಾದ ನೀವು ಮೋಟಾರು ಸೈಕಲನ್ನು ಅತಿ ವೇಗ ಮತ್ತು ಅಜಾಗರೂಕತೆಯಿಂದ ಚಾಲನೆ ಮಾಡಿ ಚಾಸಾ–2 ರವರ ಮೋಟಾರು ಸೈಕಲ್‌ಗೆ ಹಿಂದಿನಿಂದ ಡಿಕ್ಕಿ ಮಾಡಿದ ಪರಿಣಾಮ, ಚಾಸಾ–2 ರವರ ಬಲಭಾಗದ ಹಣೆಗೆ, ಮರ್ಮಾಂಗದ ಬಳಿಯ ಮೂಳೆಗೆ

ಪೆಟ್ಟಾಗಿ ತೀವ್ರ ಸ್ವರೂಪದ ಗಾಯ ಉಂಟಾಗಿದ್ದು, ಆ ಮೂಲಕ ಆರೋಪಿಯಾದ ನೀವು ಭಾರತೀಯ ನ್ಯಾಯ ಸಂಹಿತೆ ಕಲಂ **125(b)** ರ ಅಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞತೆಯಲ್ಲಿ ಎಸಗಿರುತ್ತೀರಿ ಎಂದು ಅಪಾದಿಸಲಾಗಿದೆ.

ಕೊನೆಯದಾಗಿ ಮೇಲೆ ಹೇಳಿರುವ ದಿನಾಂಕ, ಸಮಯ ಮತ್ತು ಸ್ಥಳದಂದು ಆರೋಪಿಯಾದ ನೀವು ಕಾರನ್ನು ಅತಿ ವೇಗ ಮತ್ತು ಅಜಾಗರೂಕತೆಯಿಂದ ಚಾಲನೆ ಮಾಡಿ ಚಾಸಾ-2 ರವರ ಮೋಟಾರು ಸೈಕಲ್‌ಗೆ ಹಿಂದಿನಿಂದ ಡಿಕ್ಕಿ ಮಾಡಿದ ಪರಿಣಾಮ, ಚಾಸಾ.2 ರವರ ಎರಡು ಕಾಲಿನ ತೊಡೆ ಮತ್ತು ಬಲಗಾಲಿನ ಮಂಡಿಗೆ ಪೆಟ್ಟಾಗಿ ಸಾಮಾನ್ಯ ಸ್ವರೂಪದ ಗಾಯ ಉಂಟಾಗಿದ್ದು, ಆ ಮೂಲಕ ಆರೋಪಿಯಾದ ನೀವು ಭಾರತೀಯ ನ್ಯಾಯ ಸಂಹಿತೆ ಕಲಂ **125(a)** ರ ಅಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞತೆಯಲ್ಲಿ ಎಸಗಿರುತ್ತೀರಿ ಎಂದು ಅಪಾದಿಸಲಾಗಿದೆ.

**(ಮೇಲ್ಕಂಡ ಆರೋಪಗಳ ಬಗ್ಗೆ ಆರೋಪಿಯಾದ ನೀವು ಈ ಮಾನ್ಯ ನ್ಯಾಯಾಲಯದಲ್ಲಿ ವಿಚಾರಣೆಗೊಳಪಡತಕ್ಕದ್ದು ಎಂದು ನಾನು ನಿರ್ದೇಶಿಸುತ್ತೇನೆ.)**

**(ಸಚಿನ್ ಹೆಚ್.ಆರ್)**
**ಪ್ರಧಾನ ಸಿವಿಲ್ ನ್ಯಾಯಾಧೀಶರು**
**ಮತ್ತು ಜೆ.ಎಂ.ಎಫ್.ಸಿ., ಟಿ.ನರಸೀಪುರ.**

**ಆರೋಪಿಯ ಹೇಳಿಕೆ**

ಪ್ರಶ್ನೆ-1 ಈಗ ಓದಿ ಹೇಳಿದ ಆರೋಪಣೆಯನ್ನು ಅರ್ಥ ಮಾಡಿಕೊಂಡಿರಾ ?

ಉತ್ತರಃ

ಪ್ರಶ್ನೆ-2 ಮೇಲೆ ಹೇಳಿದ ಆರೋಪಣೆಯನ್ನು ಒಪ್ಪಿಕೊಳ್ಳುವಿರಾ ? ಅಥವಾ ವಿಚಾರಣೆ ಆಗಬೇಕೆನ್ನುವಿರಾ?
ಉತ್ತರಃ

**(ಮೇಲ್ಕಂಡ ಆರೋಪಣೆಯನ್ನು ಆರೋಪಿಗೆ ತಿಳಿದ ಭಾಷೆಯಲ್ಲಿ ತೆರೆದ ನ್ಯಾಯಾಲಯದಲ್ಲಿ ಓದಿ ಹೇಳಿ ಅವರು ಕೊಟ್ಟ ಉತ್ತರವನ್ನು ಬರೆದು ಕೊಂಡಿದ್ದು ಅವು ಸರಿಯಾಗಿರುತ್ತದೆ ಎಂದು ಈ ಮೂಲಕ ದೃಢೀಕರಿಸುತ್ತೇನೆ.)**

**(ಸಚಿನ್ ಹೆಚ್.ಆರ್)**
**ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು**
**ಜೆ.ಎಂ.ಎಫ್.ಸಿ , ಟಿ.ನರಸೀಪುರ.**

**ಆರೋಪಿ ಸಹಿಃ**